ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ:**1344/2024**

ಪಿಡಬ್ಲ್ಯೂ-**2**
ಸಿಡಬ್ಲ್ಯೂ-**3**

ಸಾಕ್ಷಿಗೆ ದಿನಾಂಕ **12.06.2026** ರಂದು ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿಯ ಹೆಸರು | : | ಚಿಕ್ಕಸ್ವಾಮಿ |
| ತಂದೆಯ ಹೆಸರು | : | ಕರಿಯಪ್ಪ |
| ವಯಸ್ಸು | : | 41 ವರ್ಷ |
| ಉದ್ಯೋಗ | : | ಕೂಲಿ ಕೆಲಸ |
| ವಾಸಸ್ಥಳ | : | ಕಬ್ಬಳ ಗ್ರಾಮ |

ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ

ಈಗ ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿಯ ಪರಿಚಯ ಇರುತ್ತದೆ.

ಚಾಸಾ-2 ರವರ ಪರಿಚಯ ಇರುತ್ತದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಈಗ ನಾನು ನೋಡುತ್ತಿರುವ ದಾಖಲೆಯಲ್ಲಿ ಇರುವ ಸಹಿ ನನ್ನದಾಗಿರುತ್ತದೆ. ಸದರಿ ದಾಖಲಾತಿಯು ಸ್ಥಳ ಮತ್ತು ಅಮಾನತ್ತು ಮಹಜರ್ ಆಗಿದ್ದು ಈಗಾಗಲೇ ನಿಪಿ-1 ಎಂದು ಗುರುತಿಸಿದ್ದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-1(ಬಿ)ಎಂದು ಗುರುತಿಸಲಾಯಿತು. ಪಂಚರಿಗೆ ಜಾರಿ ಮಾಡಿದ ನೋಟೀಸನ್ನು ನಿಪಿ-**7** ಎಂದು ಸಾಕ್ಷಿ ಸಹಿ ನಿಪಿ-7(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಅಮಾನತ್ತು ಪಡಿಸಲಾದ ಸ್ವತ್ತಿನ ಪಟ್ಟಿಯಲ್ಲಿನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ಶೋಧನಾ ಸಮುಚಿತ ಆಧಾರವನ್ನು ಈಗಾಗಲೇ ನಿಪಿ-4 ಎಂದು ಸಾಕ್ಷಿ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಮಾದರಿ ಸೀಲಿನ ನಕಲನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-5 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-5(ಬಿ) ಎಂದು ಗುರುತಿಸಲಾಯಿತು. ಸದರಿ ದಾಖಲೆಗಳಿಗೆ ಸುಮಾರು 2 ವರ್ಷಗಳ ಹಿಂದೆ ಅಬಕಾರಿ ಪೋಲೀಸರ ಕಛೇರಿಯಲ್ಲಿ ಅವರ ಸೂಚನೆ ಮೇರೆಗೆ ಸಹಿ ಮಾಡಿರುತ್ತೇನೆ. ಯಾವ ಕಾರಣಕ್ಕೆ ಸಹಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಯಾವುದೇ ವಸ್ತುವನ್ನು ಅಮಾನತ್ತು

ಮಾಡಿಕೊಂಡಿರುವುದಿಲ್ಲ. ನಿಪಿ-1 ರಿಂದ 5 ರಲ್ಲಿನ ವಿಚಾರಗಳು ನನಗೆ ಗೊತ್ತಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ. ನ್ಯಾಯಾಲಯದ ಮುಂದೆ ಇರುವ ಮುದ್ದೆ ಮಾಲನ್ನು ನೋಡಿ ಗುರುತಿಸಿರುವುದಿಲ್ಲ.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದು ಸಕಾರಣಗಳನ್ನು ಮನಗಂಡು ಅನುಮತಿ ನೀಡಲಾಯಿತು)

<u>ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ</u>

ದಿನಾಂಕ 19.04.2024 ರಂದು ಅಬಕಾರಿ ಉಪನಿರೀಕ್ಷಕರು ಬೆಲಗೂರಿನ ಬಸ್ ನಿಲ್ದಾಣದ ಮುಂಭಾಗದಲ್ಲಿ ನಿಂತಿದ್ದ ನನ್ನನ್ನು ಮತ್ತು ಚಾಸಾ-2 ರವರನ್ನು ನಮ್ಮ ಬಳಿ ಬಂದು ತಿಳಿಸಿದ ಮಾಹಿತಿ ಏನೆಂದರೆ ಬೆಲಗೂರು ಗ್ರಾಮದಿಂದ ಶ್ರೀ ಬಿಂದುಮಾಧವ ಅನುಷ್ಠಾನ ಮಂದಿರಕ್ಕೆ ಹೋಗುವ ರಸ್ತೆಯಲ್ಲಿ ಒಬ್ಬ ವ್ಯಕ್ತಿ ದ್ವಿಚಕ್ರ ವಾಹನದಲಿ ಅಕ್ರಮ ಮದ್ಯ ಸಾಗಾಣಿಕೆ ಮಾಡುತ್ತಿರುವ ಬಗ್ಗೆ ಬಾತ್ಮಿ ದೊರೆತಿದ್ದು ದಾಳಿ ಸಮಯದಲ್ಲಿ ಪಂಚರಾಗಿ ಸಹಕರಿಸಬೇಕು ಎಂದು ನಮ್ಮನ್ನು ಕೇಳಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಾವು ಒಪ್ಪಿ ಅವರೊಂದಿಗೆ ಮಾಹಿತಿ ಬಂದ ಸ್ಥಳಕ್ಕೆ ಹೋಗಿ ಸ್ವಲ್ಪ ದೂರದಲ್ಲಿ ನಿಂತು ಅನುಮಾನಸ್ಪದ ವಾಹನಗಳನ್ನು ತಪಾಸಣೆ ಮಾಡುವ ಸಮಯದಲ್ಲಿ ಒಬ್ಬ ವ್ಯಕ್ತಿ ಅದೇ ಮಾರ್ಗವಾಗಿ ತನ್ನ ದ್ವಿ ಚಕ್ರ ವಾಹನದ ಪೆಟ್ರೋಲ್ ಟ್ಯಾಂಕ್ ಮೇಲೆ ಒಂದು ಬಿಳಿ ಬಣ್ಣದ ವಿಮಲ್ ಚೀಲವನ್ನು ಇಟ್ಟುಕೊಂಡು ಬರುತ್ತಿದ್ದನು ಎಂದರೆ ಸರಿಯಲ್ಲ . ಆತನನ್ನು ಅಧಿಕಾರಿಗಳು ವಾಹನ ನಿಲ್ಲಿಸುವಂತೆ ಸೂಚಿಸಿದಾಗ ಸವಾರನು ಗಾಬರಿಯಿಂದ ವಾಹನವನ್ನು ಮತ್ತು ಅದರಲ್ಲಿ ಇದ್ದ ಚೀಲವನು ಅಲ್ಲಿಯೇ ಬಿಟ್ಟು ಓಡಿ ಹೋಗಿದ್ದು , ಹಿಡಿಯಲು ಪ್ರಯತ್ನಿಸಿದರೂ ಸಿಗಲಿಲ್ಲ ಎಂದರೆ ಸರಿಯಲ್ಲ . ನಂತರ ದ್ವಿಚಕ್ರ ವಾಹನ ಮತ್ತು ಚೀಲವನ್ನು ಶೋಧನೆ ಮಾಡಲು ಸ್ಥಳದಲ್ಲಿ ಶೋಧನಾ ವಾರೆಂಟ್ ತಯಾರಿಸಿ ಚೀಲವನುತೆಗೆದು ನೋಡಿದಾಗ 90 ಎಂ ಎಲ್ ನ 144 ರಾಜಾ ವಿಸ್ಕಿಯ ಟೆಟ್ರಾ ಪ್ಯಾಕುಗಳಾಗಿದ್ದವು ಎಂದರೆ ಸರಿಯಲ್ಲ. ಸದರಿ ಮದ್ಯ ಸಂಗ್ರಹಣೆ ಮಾಡಿದ ಬಗ್ಗೆ ಆರೋಪಿ ಬಳಿ ಯಾವುದೇ ದಾಖಲೆ ಅಥವಾ ರಹದಾರಿಪತ್ರ ಇರುವುದಿಲ್ಲ ಎಂದು ಖಚಿತಪಡಿಸಿಕೊಂಡು ಅಬಕಾರಿ ಕಾನೂನಿನ ಉಲ್ಲಂಘನೆಯಾದ ಬಗ್ಗೆ ನಮಗೆ ತಿಳಿಸಿ ದೊರೆತ ಮದ್ಯದ ಎಲ್ಲಾ 144 ಪ್ಯಾಕುಗಳನ್ನು ರಾಸಾಯನಿಕ ಪರೀಕ್ಷೆಗಾಗಿ ನನ್ನ ಮತ್ತು ಚಾಸಾ-2 ರವರ ಸಮಕ್ಷಮ

ಮಾದರಿಗೆ ತೆಗೆದಿದ್ದು ಚೀಲದಿಂದ ಸುತ್ತಿ ದಾರದಿಂದ ಕಟ್ಟಿ ಚಿಕ್ಕ ಚೀಟಿಗಳಿಗೆ ವಿವರ ಬರೆದು ನಮ್ಮ ಸಹಿ ಪಡೆದರು ಎಂದರೆ ಸರಿಯಲ್ಲ. ಮಹಜರ್ ಕ್ರಮವನ್ನು ನಿಪಿ-1 ರಂತೆ ಮದ್ಯಾಹ್ನ 12 ರಿಂದ 1.15 ರವರೆಗೆ ಬರೆದು ಮುಗಿಸಿದರು ಎಂದರೆ ಸರಿಯಲ್ಲ. ಸ್ಥಳ ದಲ್ಲಿ ಮಾದರಿ ಸೀಲಿನ ನಕಲು ತಯಾರಿಸಿ ನಮ್ಮ ಸಹಿ ಪಡೆದರು ಎಂದರೆ ಸರಿಯಲ್ಲ . ನಿಪಿ-1 ಕ್ಕೆ ನಾನು ಸ್ಥಳದಲ್ಲಿ ಹಾಜರಿದ್ದು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ಈಗ ಓದಿ ಹೇಳಿದಂತೆ ನಾನು ಈ ಬಗ್ಗೆ ದಿನಾಂಕ 30.07.2024 ರಂದು ಪೊಲೀಸರ ಮುಂದೆ ನನ್ನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಹೇಳಿಕೆಯನ್ನು ನಿರಾಕರಿಸಿದ ಕಾರಣ ಅದನ್ನು ನಿಪಿ-8 ಎಂದು ಗುರುತಿಸಲಾಯಿತು.

ಆರೋಪಿ ನಮ್ಮ ಊರಿನವನಾದ ಕಾರಣ ಆತನಿಗೆ ಸಹಾಯ ಮಾಡುವ ಉದ್ದೇಶದಿಂದ ನಾನು ದಾಳಿ ಸಮಯದಲ್ಲಿ ಹಾಜರಿದ್ದು ನಿಪಿ-8 ರಂತೆ ಹೇಳಿಕೆ ನೀಡಿದ್ದರೂ ಕೂಡ ಸುಳ್ಳು ಸಾಕ್ಷ್ಯ ನುಡಿಯುತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿ ಪರ ಶ್ರೀ ಟಿ ಆರ್ ಎಸ್ ವಕೀಲರಿಂದ

ಆರೋಪಿ ಪರ ವಕೀಲರು ತಮ್ಮ ಪರ ಪಾಟೀ ಸವಾಲು ಏನೂ ಇಲ್ಲ ಎಂದು ಸಲ್ಲಿಸುತ್ತಾರೆ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತ್ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ.ಸರಿ ಅದೆ.

(ಪ್ರಸನ್ನಕುಮಾರ್ ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಜೆ ಎಂ ಎಫ್ ಸಿ
ನ್ಯಾಯಾಲಯ,ಹೊಸದುರ್ಗ.